**All India Radio: Bangalore**
**National Bulletin In Kannada**
**27.01.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

- ನವದೆಹಲಿಯಲ್ಲಿಂದು ಎನ್‌ಸಿಸಿ ರ‍್ಯಾಲಿಯನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಭಾಷಣ
- ಉತ್ತರಾಖಂಡದಲ್ಲಿ ಇಂದಿನಿಂದ ಏಕರೂಪ ನಾಗರಿಕ ಸಂಹಿತೆ - ಯುಸಿಸಿ ಜಾರಿ
- ಮಹಾ ಕುಂಭಮೇಳ ಪ್ರದೇಶವನ್ನು ವಾಹನ ರಹಿತ ವಲಯವೆಂದು ಘೋಷಿಸಿದ ಉತ್ತರ ಪ್ರದೇಶ ಸರ್ಕಾರ
- ಮಹಿಳಾ ಹಾಕಿ ಇಂಡಿಯಾ ಲೀಗ್ ; ಉದ್ಘಾಟನಾ ಆವೃತ್ತಿಯ ಚಾಂಪಿಯನ್ ಆಗಿ ಹೊರಹೊಮ್ಮಿದ ಒಡಿಶಾ ವಾರಿಯರ್ಸ್

<><><><>

ಪ್ರಧಾನಿ ನರೇಂದ್ರ ಮೋದಿ ಅವರಿಂದು ನವದೆಹಲಿಯ ಕಾರ್ಯಪ್ಪ ಪರೇಡ್ ಮೈದಾನದಲ್ಲಿ ನಡೆಯುವ ವಾರ್ಷಿಕ ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್-ಎನ್‌ಸಿಸಿ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಲಿದ್ದಾರೆ. 'ಯುವ ಶಕ್ತಿ, ವಿಕಸಿತ ಭಾರತ' ಎಂಬುದು ಈ ವರ್ಷದ ಎನ್‌ಸಿಸಿ ಪಿಎಂ ರ‍್ಯಾಲಿಯ ಧ್ಯೇಯವಾಕ್ಯವಾಗಿದೆ. ಈ ಸಂದರ್ಭದಲ್ಲಿ, ೮೦೦ ಕ್ಕೂ ಹೆಚ್ಚು ಕೆಡೆಟ್‌ಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ರಾಷ್ಟ್ರ ನಿರ್ಮಾಣದ ಕಡೆಗೆ ಎನ್‌ಸಿಸಿಯ ಬದ್ಧತೆಯನ್ನು ಪ್ರದರ್ಶಿಸಲಾಗುವುದು. ಇದಲ್ಲದೆ, ರ‍್ಯಾಲಿಯಲ್ಲಿ ೧೮ ಮಿತ್ರ ರಾಷ್ಟ್ರಗಳಿಂದ ೧೪೪ ಯುವ ಕೆಡೆಟ್‌ಗಳು ಭಾಗವಹಿಸಲಿದ್ದಾರೆ. ಇದಲ್ಲದೆ, ದೇಶಾದ್ಯಂತದ ಮೇರಾ ಯುವ ಭಾರತ್, ಶಿಕ್ಷಣ ಸಚಿವಾಲಯ ಮತ್ತು ಬುಡಕಟ್ಟು ವ್ಯವಹಾರಗಳ ೬೫೦ ಕ್ಕೂ ಹೆಚ್ಚು ಸ್ವಯಂಸೇವಕರು ವಿಶೇಷ ಅತಿಥಿಗಳಾಗಿ ರ‍್ಯಾಲಿಯಲ್ಲಿ ಭಾಗವಹಿಸಲಿದ್ದಾರೆ.

<><><><>

ಉತ್ತರಾಖಂಡದಲ್ಲಿ ಇಂದಿನಿಂದ ಏಕರೂಪ ನಾಗರಿಕ ಸಂಹಿತೆ -ಯುಸಿಸಿ ಜಾರಿಗೆ ಬರಲಿದೆ. ಆ ಮೂಲಕ ಉತ್ತರಾಖಂಡ್ ಈ ಕಾನೂನನ್ನು ಜಾರಿಗೆ ತಂದ ಮೊದಲ ರಾಜ್ಯವಾಗಲಿದೆ. ಅಧಿಕೃತ ತರಬೇತಿ ಸೇರಿದಂತೆ ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿವೆ ಎಂದು ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಹೇಳಿದ್ದಾರೆ.

ಈ ಕುರಿತು ಒಂದು ವರದಿ :

ಎಲ್ಲಾ ನಾಗರಿಕರಿಗೆ ಸಮಾನ ಹಕ್ಕುಗಳನ್ನು ಖಾತ್ರಿಪಡಿಸುವ ಮೂಲಕ ವೈಯಕ್ತಿಕ ನಾಗರಿಕ ಕಾನೂನುಗಳನ್ನು ಪ್ರಮಾಣೀಕರಿಸುವುದು ಏಕರೂಪ ನಾಗರಿಕ ಸಂಹಿತೆ - ಯುಸಿಸಿಯ ಗುರಿಯಾಗಿದೆ. ಜಾತಿ, ಧರ್ಮ ಮತ್ತು ಲಿಂಗದ ಆಧಾರದ ಮೇಲೆ ತಾರತಮ್ಯ ಮಾಡುವ ವೈಯಕ್ತಿಕ ನಾಗರಿಕ ವಿಷಯಗಳಿಗೆ ಸಂಬಂಧಿಸಿದ ಎಲ್ಲಾ ಕಾನೂನುಗಳಲ್ಲಿ ಏಕರೂಪತೆಯನ್ನು ತರಲು ಯುಸಿಸಿ ಅಡಿಯಲ್ಲಿ ಪ್ರಯತ್ನಿಸಲಾಗಿದೆ. ೨೦೨೨ ರ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಉತ್ತರಾಖಂಡದಲ್ಲಿ ಯುಸಿಸಿ ಅನುಷ್ಠಾನ ಮಾಡುವುದು ಬಿಜೆಪಿಯ ಪ್ರಮುಖ ಆದ್ಯತೆಯಾಗಿತ್ತು. ರಾಜ್ಯ ಸಚಿವ ಸಂಪುಟ ಇತ್ತೀಚೆಗೆ ಯುಸಿಸಿ ಅನುಷ್ಠಾನಕ್ಕಾಗಿ ನಿಯಮಗಳನ್ನು ಅನುಮೋದಿಸಿ, ಅದರ ಅನುಷ್ಠಾನದ ದಿನವನ್ನು ನಿರ್ಧರಿಸಲು ಮುಖ್ಯಮಂತ್ರಿಗೆ ಅಧಿಕಾರ ನೀಡಿತು. ಧರ್ಮವನ್ನು ಲೆಕ್ಕಿಸದೆ, ಪರಿಶಿಷ್ಟ ಪಂಗಡಗಳನ್ನು ಹೊರತುಪಡಿಸಿ, ರಾಜ್ಯದ ಎಲ್ಲಾ ನಾಗರಿಕರಿಗೆ ಮದುವೆ, ವಿಚ್ಛೇದನ, ಮತ್ತು ಉತ್ತರಾಧಿಕಾರದ ಕುರಿತು ಏಕರೂಪ ಮತ್ತು ಸಮಾನ ನಿಯಮಗಳನ್ನು ಸ್ಥಾಪಿಸಲು ಯುಸಿಸಿ ಪ್ರಯತ್ನಿಸುತ್ತದೆ. ಇದು ಎಲ್ಲಾ ವಿವಾಹಗಳು ಮತ್ತು ಲಿವ್-ಇನ್ ಸಂಬಂಧಗಳ ನೋಂದಣಿಯನ್ನು ಕಡ್ಡಾಯಗೊಳಿಸುತ್ತದೆ.

<><><><>

ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಅವರು, ಗಣತಂತ್ರ ದಿನ ಪರೇಡ್‌ಗಾಗಿ ಆಗಮಿಸಿದ್ದ ವಿಶೇಷ ಅತಿಥಿಗಳೊಂದಿಗೆ ನವದೆಹಲಿಯ ಆಕಾಶವಾಣಿ ಭವನದಲ್ಲಿ ನಿನ್ನೆ ಸಂವಾದ ನಡೆಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ, ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ತಿಳಿಸಿದಂತೆ ವಿಶೇಷ ಅತಿಥಿಗಳು ಸಮಾಜಕ್ಕಾಗಿ ಅವಿರತ ಸೇವೆ ಸಲ್ಲಿಸಿದ್ದಾರೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಆಕಾಶವಾಣಿ ಸುದ್ದಿವಿಭಾಗದೊಂದಿಗೆ ಮಾತನಾಡಿದ ಅಶ್ವಿನಿ ವೈಷ್ಣವ್, ಪ್ರಧಾನಮಂತ್ರಿಯವರು ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ ಈ ಸಾಧಕರು ಮಾಡಿದ ಸ್ಫೂರ್ತಿದಾಯಕ ಕೆಲಸವನ್ನು ಪಸರಿಸುವಂತೆ ಮಾಡಿದ್ದಾರೆ ಎಂದರು.

ಧ್ವನಿ : ಅಶ್ವಿನಿ ವೈಷ್ಣವ್

ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಸೆಹಗಲ್, ಆಕಾಶವಾಣಿ ಮಹಾ ನಿರ್ದೇಶಕಿ ಡಾ. ಪ್ರಾಗ್ಯಾ ಪಾಲಿವಾಲ್ ಗೌರ್ ಮತ್ತು ದೂರದರ್ಶನ ಮಹಾ ನಿರ್ದೇಶಕಿ ಕಾಂಚನ್ ಪ್ರಸಾದ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><><>

ರೈತರ ಸಬಲೀಕರಣ ಮತ್ತು ಸಮೃದ್ಧಿಗಾಗಿ ಕೇಂದ್ರ ಸರ್ಕಾರ ಸಾಧ್ಯವಿರುವ ಎಲ್ಲ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ೭೬ ನೇ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಸರ್ಕಾರದಿಂದ ವಿಶೇಷವಾಗಿ ಆಹ್ವಾನಿಸಲ್ಪಟ್ಟ ರೈತರೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು, ಆಧುನಿಕ ಕೃಷಿ ತಂತ್ರಗಳ ಅಳವಡಿಕೆಯಿಂದಾಗುವ ಪ್ರಯೋಜನ ಮತ್ತು ಅದರ ಮಹತ್ವದ ಕುರಿತು ವಿವರಿಸಿದರು. ರೈತರ ಸಮಸ್ಯೆಗಳನ್ನು ಪರಿಹರಿಸಲು ತಂತ್ರಜ್ಞಾನವನ್ನು ಬಳಸಲಾಗುತ್ತಿದೆ ಎಂದ ಅವರು ರೈತರು ತಮ್ಮ ಉತ್ಪನ್ನಗಳನ್ನು ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡಲು ಅನುವು ಮಾಡಿಕೊಡುವುದು, ಮಧ್ಯವರ್ತಿಗಳ ಪಾತ್ರವನ್ನು ಕಡಿಮೆ ಮಾಡುವುದು ಮತ್ತು ರೈತರಿಗೆ ಗರಿಷ್ಠ ಲಾಭವನ್ನು ಖಚಿತಪಡಿಸಿಕೊಳ್ಳುವುದು ಸರ್ಕಾರದ ಉದ್ದೇಶವಾಗಿದೆ ಎಂದು ಸಚಿವರು ತಿಳಿಸಿದರು.

<><><><>

ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದಿನಿಂದ ೧೧ ನೇ ಜಂಟಿ ಆಯೋಗದ ಸಭೆಗಾಗಿ ಒಮಾನ್‌ನ ಮಸ್ಕತ್‌ಗೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು, ಒಮಾನ್‌ನ ವಾಣಿಜ್ಯ, ಕೈಗಾರಿಕೆ ಮತ್ತು ಹೂಡಿಕೆ ಉತ್ತೇಜನ ಸಚಿವ ಕೈಸ್ ಬಿನ್ ಮೊಹಮ್ಮದ್ ಬಿನ್ ಮೂಸಾ ಅಲ್-ಯೂಸೆಫ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಇಬ್ಬರೂ ಸಚಿವರು ವ್ಯಾಪಾರ, ಹೂಡಿಕೆ ಮತ್ತು ಜಾಗತಿಕ ಆರ್ಥಿಕ ಪರಿಸ್ಥಿತಿಯ ಕುರಿತು ವ್ಯಾಪಕ ಚರ್ಚೆಗಳನ್ನು ನಡೆಸಲಿದ್ದಾರೆ.

ಈ ಭೇಟಿಯು ಎರಡೂ ದೇಶಗಳ ನಡುವಿನ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ.

<><><><>

ಕೇರಳದಲ್ಲಿ, ನಿನ್ನೆ ಸಂಜೆ ಕೋಝಿಕ್ಕೋಡ್‌ನ ತಿಕ್ಕೋಡಿ ಬೀಚ್‌ನಲ್ಲಿ ಅಲೆಗಳ ರಭಸಕ್ಕೆ ಸಿಲುಕಿ ಇಬ್ಬರು ಮಹಿಳೆಯರು ಸೇರಿದಂತೆ ನಾಲ್ವರು ಮುಳುಗಿ ಸಾವನ್ನಪ್ಪಿರುವ ಘಟನೆ ನಡೆದಿದೆ. ವಯನಾಡ್ ಜಿಲ್ಲೆಯ ಕಲ್ಪೆಟ್ಟಾದ ಗುಂಪಿನ ಭಾಗವಾಗಿದ್ದ ಐದು ಜನರು ಸಮುದ್ರಕ್ಕೆ ಇಳಿದಾಗ ಈ ದುರ್ಘಟನೆ ಸಂಭವಿಸಿದೆ.

<><><><>

ಇಂದಿನಿಂದ ಜಾರಿಗೆ ಬರುವಂತೆ ಪ್ರಯಾಗ್‌ರಾಜ್‌ನಲ್ಲಿರುವ ಮಹಾ ಕುಂಭಮೇಳ ಪ್ರದೇಶವನ್ನು ವಾಹನ ರಹಿತ ವಲಯವೆಂದು ಉತ್ತರ ಪ್ರದೇಶ ಸರ್ಕಾರ ಘೋಷಿಸಿದೆ. ಇದೇ ೨೯ ರಂದು ಮೌನಿ ಅಮವಾಸ್ಯೆಯಂದು ನಿರೀಕ್ಷಿಸಲಾದ ಬೃಹತ್ ಜನಸಂದಣಿಯನ್ನು ಸುಗಮವಾಗಿ ನಿರ್ವಹಿಸಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಜನದಟ್ಟಣೆಯ ಮೇಲ್ವಿಚಾರಣೆ ಮಾಡಲು ಸಂಯೋಜಿತ ನಿಯಂತ್ರಣ ಕೇಂದ್ರವನ್ನು ಸ್ಥಾಪಿಸಲಾಗಿದೆ. ತುರ್ತು ಪರಿಸ್ಥಿತಿಗಳನ್ನು ನಿರ್ವಹಿಸಲು ಹೆಚ್ಚಿನ ಜನಸಂದಣಿ ಪ್ರದೇಶಗಳಲ್ಲಿ ತ್ವರಿತ ಪ್ರತಿಕ್ರಿಯಾ ತಂಡಗಳನ್ನು ನಿಯೋಜಿಸಲಾಗಿದೆ.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದು ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ಗೆ ಭೇಟಿ ನೀಡಿ ಮಹಾಕುಂಭಮೇಳದಲ್ಲಿ ಭಾಗವಹಿಸಲಿದ್ದಾರೆ. ಈ ವೇಳೆ ಸಚಿವರು, ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ಸಂಗಮವಾದ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಲಿದ್ದಾರೆ. ಗೃಹ ಸಚಿವರು ಹಲವಾರು ಸಂತರನ್ನು ಭೇಟಿ ಮಾಡುವ ನಿರೀಕ್ಷೆಯಿದೆ.

<><><><>

ಎರಡು ದಿನಗಳ ಭೇಟಿಗಾಗಿ ಚೀನಾ ಪ್ರವಾಸ ಕೈಗೊಂಡಿರುವ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನಿನ್ನೆ ಬೀಜಿಂಗ್‌ಗೆ ಆಗಮಿಸಿದರು. ಭೇಟಿಯ ಸಮಯದಲ್ಲಿ ಅವರು, ಚೀನಾ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಲಿದ್ದಾರೆ. ಇದು ಒಂದೂವರೆ ತಿಂಗಳಿಗೂ ಕಡಿಮೆ ಅವಧಿಯಲ್ಲಿ ಭಾರತ-ಚೀನಾ ನಡುವಿನ ಎರಡನೇ ಉನ್ನತ ಮಟ್ಟದ ಭೇಟಿಯಾಗಿದೆ.

ಚೀನಾದ ಮಾಜಿ ರಾಯಭಾರಿಯೂ ಆಗಿದ್ದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು, ಭಾರತ ಮತ್ತು ಚೀನಾ ನಡುವಿನ ವಿದೇಶಾಂಗ ಕಾರ್ಯದರ್ಶಿ-ಉಪ ಮಂತ್ರಿ ಕಾರ್ಯವಿಧಾನದ ಸಭೆಗಾಗಿ ಬೀಜಿಂಗ್‌ಗೆ ಭೇಟಿ ನೀಡಿದ್ದಾರೆ.

<><><>

ಒಡಿಶಾ ವಾರಿಯರ್ಸ್ ತಂಡ ಮಹಿಳೆಯರ ಹಾಕಿ ಇಂಡಿಯಾ ಲೀಗ್‌ನ ಉದ್ಘಾಟನಾ ಆವೃತ್ತಿಯ ಚಾಂಪಿಯನ್ ಆಗಿ ಹೊರ ಹೊಮ್ಮಿದೆ. ನಿನ್ನೆ ರಾಂಚಿಯಲ್ಲಿ ನಡೆದ ಫೈನಲ್‌ನಲ್ಲಿ ಜೆಎಸ್‌ಡಬ್ಲ್ಯೂ ಸೂರ್ಮಾ ಹಾಕಿ ಕ್ಲಬ್ ವಿರುದ್ಧ ೨-೧ ಅಂತರದಿಂದ ಜಯ ಸಾಧಿಸಿದ ಒಡಿಶಾ ವಾರಿಯರ್ಸ್ ತಂಡ ಉದ್ಘಾಟನಾ ಆವೃತ್ತಿಯ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದೆ. ಎರಡು ನಿರ್ಣಾಯಕ ಗೋಲುಗಳಿಸಿದ ರುತುಜಾ ದಾದಾಸೊ ಪಿಸಾಲ್ ಅವರಿಗೆ ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ನೀಡಲಾಯಿತು. ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ, ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್, ಒಡಿಶಾ ವಾರಿಯರ್‌ನ ನಾಯಕಿ ನೇಹಾ ಗೋಯಲ್ ಅವರಿಗೆ ಟ್ರೋಫಿ ಪ್ರದಾನ ಮಾಡಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅವರು, ಟೂರ್ನಿಯುದ್ದಕ್ಕೂ ತಮ್ಮ ಅದ್ಭುತ ಪ್ರದರ್ಶನ ತೋರಿದ ಎಲ್ಲಾ ಇತರ ತಂಡಗಳು ಮತ್ತು ಅವರ ಆಟಗಾರರನ್ನು ಅಭಿನಂದಿಸಿ, ಶುಭಾಶಯ ಕೋರಿದರು.

<><><>

ಭಾರತದ ವನಿತೆಯರ ತಂಡ ಕೌಲಾಲಂಪುರ್ ನಲ್ಲಿ ನಡೆಯುತ್ತಿರುವ ೨೦೨೫ ರ ಐಸಿಸಿ ಅಂಡರ್-೧೯ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೆಮಿಫೈನಲ್ ಪ್ರವೇಶಿಸಿದೆ. ಬೆಯುಮಾಸ್ ಓವಲ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಭಾರತ ತಂಡ ಬಾಂಗ್ಲಾದೇಶ ವಿರುದ್ಧ ೮ ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಬಾಂಗ್ಲಾದೇಶ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೬೪ ರನ್ ಗಳಿಸಿತು. ಭಾರತದ ತಂಡ ೭.೧ ಓವರ್‌ನಲ್ಲಿ ೨ ವಿಕೆಟ್ ನಷ್ಟಕ್ಕೆ ೬೬ ರನ್ ಮಾಡಿತು. ಸೆಮಿಫೈನಲ್‌ನಲ್ಲಿ ಸ್ಥಾನ ದೃಢಪಡಿಸಿಕೊಂಡಿರುವ ಭಾರತ ತಂಡವು ಮಂಗಳವಾರ ಸ್ಕಾಟ್ಲೆಂಡ್ ವಿರುದ್ಧ ತನ್ನ ಕೊನೆಯ ಸೂಪರ್ ಸಿಕ್ಸ್ ಪಂದ್ಯವನ್ನು ಆಡಲಿದೆ.

<><><>

ಮೆಲ್ಬೋರ್ನ್‌ನ ರಾಡ್‌ಲೆವರ್ ಅರೆನಾದಲ್ಲಿ ನಿನ್ನೆ ನಡೆದ ಆಸ್ಟ್ರೇಲಿಯಾ ಓಪನ್ ಗ್ರ್ಯಾನ್‌ಸ್ಲ್ಯಾಮ್ ಟೆನಿಸ್ ಟೂರ್ನಿಯ ಪರುಷರ ವಿಭಾಗದ ಫೈನಲ್ ಪಂದ್ಯದಲ್ಲಿ ವಿಶ್ವದ ನಂ. ೧ ಶ್ರೇಯಾಂಕಿತ ಇಟಲಿಯ ಜೆನ್ನಿಕ್ ಸಿನ್ನರ್ ಪ್ರಶಸ್ತಿ ಮುಡಿಗೇರಿಸಿಕೊಂಡಿದ್ದಾರೆ. ಜೆನ್ನಿಕ್ ಜರ್ಮನಿಯ ಅಲೆಗ್ಝಾಂಡರ್ ಜ್ವರೆವ್ ಅವರನ್ನು ೬-೩, ೭-೬, ೬-೩, ಸೆಟ್‌ಗಳ ಅಂತರದಲ್ಲಿ ಮಣಿಸಿದರು. ಆ ಮೂಲಕ ೨೩ ವರ್ಷದ ಜೆನ್ನಿಕ್ ಸಿನ್ನರ್ ಜಿಮ್ ಕೊರಿಯರ್ ಅವರ ನಂತರ ಈ ಪ್ರಶಸ್ತಿ ಗೆದ್ದ ಅತಿ ಕಿರಿಯ ಆಟಗಾರರಾಗಿದ್ದರು. ಮಹಿಳೆಯರ ಡಬಲ್ಸ್ ಫೈನಲ್‌ನಲ್ಲಿ ಅಗ್ರ ಶ್ರೇಯಾಂಕಿತ ಜೋಡಿ ಅಮೆರಿಕದ ಟೈಲರ್ ಟೌನ್‌ಸೆಂಡ್ ಮತ್ತು ಜೆಕ್ ಗಣರಾಜ್ಯದ ಕ್ಯಾಟರಿನಾ ಸಿನಿಯಾ ಕೋವಾ ಜೋಡಿ ಲ್ಯಾಟ್ವಿಯಾದ ಜಲೆನಾ ಒಸ್ಟಾ ಪೆಂಕೊ ಮತ್ತು ತೈವಾನ್‌ನ ಸಿಹ್ ಸು ವಿ ಜೋಡಿಯನ್ನು ೬-೨, ೬-೭, ೬-೩ ಸೆಟ್‌ಗಳಿಂದ ಸೋಲಿಸಿ ಪ್ರಶಸ್ತಿ ಮುಡಿಗೇರಿಸಿಕೊಂಡಿದೆ.

<><><><>

ನಿನ್ನೆ ರಾತ್ರಿ ಮುಂಬೈ ಫುಟ್‌ಬಾಲ್ ಅರೆನಾದಲ್ಲಿ ನಡೆದ ಇಂಡಿಯನ್ ಸೂಪರ್ ಲೀಗ್ - ಐಎಸ್‌ಎಲ್ ಫುಟ್‌ಬಾಲ್ ಪಂದ್ಯದಲ್ಲಿ, ಮುಂಬೈ ಸಿಟಿ ಎಫ್‌ಸಿ ಮೊಹಮ್ಮದನ್ ಎಸ್‌ಸಿಯನ್ನು ೩-೦ ಅಂತರದಿಂದ ಸೋಲಿಸಿತು. ಕೋಲ್ಕತ್ತಾದ ವಿವೇಕಾನಂದ ಯುವ ಭಾರತಿ ಕ್ರಿರಂಗನ್‌ನಲ್ಲಿಂದು, ಮೋಹನ್ ಬಗಾನ್ ಸೂಪರ್ ಜೈಂಟ್ ತಂಡ ಬೆಂಗಳೂರು ಎಫ್‌ಸಿ ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭:೩೦ ಕ್ಕೆ ಪ್ರಾರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>